# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಾಜ್ಯ ಹಾಗೂ ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳ ನೇಮಕಾತಿ ಮಾಡಲು ಆಯ್ಕೆ ಸಮಿತಿಯನ್ನು ರಚಿಸುವ ಬಗ್ಗೆ.

**ಪ್ರಸ್ತಾವನೆ:**

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಲ್ಲಿನ ರಸ್ತೆಗಳ ಗುಣ ನಿಯಂತ್ರಣ ವ್ಯವಸ್ಥೆಗೆ ಪಿಎಂಜಿಎಸ್‌ವೈ ಮಾನದಂಡದಂತೆ ರಾಜ್ಯ ಮತ್ತು ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳು ಪರಿವೀಕ್ಷಣೆ ನಡೆಸಬೇಕಾಗಿರುತ್ತದೆ.

ಪ್ರಸ್ತುತ ರಾಜ್ಯ ಮತ್ತು ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳ ನೇಮಕಾತಿಗೆ ಅರ್ಜಿಗಳು ಬಂದಿದ್ದು, ಇವುಗಳನ್ನು ಪರಿಶೀಲಿಸಲು ರಾಜ್ಯ ಮಟ್ಟದಲ್ಲಿ ಸಮಿತಿ ರಚಿಸುವುದು ಅವಶ್ಯಕವಾಗಿರುತ್ತದೆ.

ರಾಜ್ಯ ಗುಣ ನಿಯಂತ್ರಣ ಮಾನಿಟರ್ (SQM) ಮತ್ತು ಜಿಲ್ಲಾ ಗುಣ ನಿಯಂತ್ರಣ ಮಾನಿಟರ್ (DQM) ರವರುಗಳ ನೇಮಕಾತಿ ಮಾಡಲು ಅರ್ಹತೆಗಳ ಪರಿಶೀಲನೆ, ಸಂದರ್ಶನ ಏರ್ಪಡಿಸಿ ಅಗತ್ಯತೆಗಳು ಕ್ರಮಬದ್ಧವಾಗಿರುವುದನ್ನು ಖಚಿತಪಡಿಸಿಕೊಂಡು ಆಯ್ಕೆ ಮಾಡುವ ಸಲುವಾಗಿ ಸಮಿತಿಯನ್ನು ರಚಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:201:ಆರ್‌ಆರ್‌ಸಿ:2013, ಬೆಂಗಳೂರು,ದಿನಾಂಕ:23–5–2014**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ರಾಜ್ಯ ಗುಣ ನಿಯಂತ್ರಣ ಮಾನಿಟರ್‌ಗಳ (SQM) ಮತ್ತು ಜಿಲ್ಲಾ ಗುಣ ನಿಯಂತ್ರಣ ಮಾನಿಟರ್ (DQM) ಗಳನ್ನು ಆಯ್ಕೆ ಮಾಡಲು ಸಂದರ್ಶನ ಏರ್ಪಡಿಸಿ, ಅರ್ಜಿಗಳನ್ನು ಪರಿಶೀಲಿಸಿ, ತಮ್ಮ ಸೇವಾವಧಿಯಲ್ಲಿ ಯಾವುದೇ ಇಲಾಖಾ ವಿಚಾರಣೆಯಲ್ಲಿ ದಂಡನೆಗೆ ಒಳಪಡದಿರುವ ಮತ್ತು ವಿಚಾರಣೆ ಎದುರಿಸದೇ ಇರುವ ಅರ್ಹರನ್ನು ಆಯ್ಕೆ ಮಾಡುವ ಸಲುವಾಗಿ ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಲು ಸರ್ಕಾರವು ಹರ್ಷಿಸುತ್ತದೆ ಹಾಗೂ ಅದರಂತೆ ಈ ಆದೇಶವನ್ನು ಹೊರಡಿಸಿದೆ.

| | | |
|---|---|---|
| 1 | ಆಯುಕ್ತರು,<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು. | ಅಧ್ಯಕ್ಷರು |
| 2 | ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು,<br>ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು | ಸದಸ್ಯರು |
| 3 | ಮುಖ್ಯ ಇಂಜಿನಿಯರ್,<br>ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು | ಸದಸ್ಯರು |

| | | |
|---|---|---|
| 4. | ನಿರ್ದೇಶಕರು<br>ಸುವರ್ಣ ಗ್ರಾಮೋದಯ ಯೋಜನೆ ಮತ್ತು ಪಶ್ಚಿಮ ಘಟ್ಟಗಳ ಅಭಿವೃದ್ಧಿ ಯೋಜನೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು. | ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು,
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, 3ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-9 ಇವರಿಗೆ ಅಗತ್ಯ ಕ್ರಮಕ್ಕಾಗಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ
6. ಭವನ, ಆನಂದ ರಾವ್ ವೃತ್ತ, ಬೆಂಗಳೂರು-560 009.
7. ಸಮಿತಿಯ ಎಲ್ಲಾ ಸದಸ್ಯರುಗಳಿಗೆ.
8. ಮಾಹಿತಿ ಕೇಂದ್ರಕ್ಕೆ.